**National Bulletins In Kannada**
**28.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.07.2025 / 19.35 hrs**

**<><*<><>*><>**

ಮುಖ್ಯಾಂಶಗಳು

೧. ಲೋಕಸಭೆಯಲ್ಲಿಂದು ಆಪರೇಷನ್ ಸಿಂದೂರ ಕುರಿತು ವಿಶೇಷ ಚರ್ಚೆ

೨. 'ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್' ಯೋಜನೆಯಡಿ ದೇಶಾದ್ಯಂತ ೧೧ ಕೋಟಿ ಮಕ್ಕಳಿಗೆ ಪೌಷ್ಟಿಕ ಆಹಾರ

೩. ಜಮ್ಮು-ಕಾಶ್ಮೀರದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಮೂವರು ಉಗ್ರರು ಹತ

೪. ಫಿಡೆ ಮಹಿಳಾ ಚೆಸ್ ವಿಶ್ವಕಪ್; ಭಾರತದ ದಿವ್ಯಾ ದೇಶ್‌ಮುಖ್‌ಗೆ ಗ್ರ್ಯಾಂಡ್ ಮಾಸ್ಟರ್ ಕಿರೀಟ

**<><*<><>*><>**

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತ ನಡೆಸಿದ ಯಶಸ್ವಿ ಮತ್ತು ನಿರ್ಣಾಯಕ ಆಪರೇಷನ್ ಸಿಂದೂರ ಕುರಿತು ಲೋಕಸಭೆಯಲ್ಲಿಂದು ವಿಶೇಷ ಚರ್ಚೆ ನಡೆಯಿತು. ಚರ್ಚೆಯನ್ನು ಪ್ರಾರಂಭಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, 'ಆಪರೇಷನ್ ಸಿಂದೂರ' ಕೇವಲ ಮಿಲಿಟರಿ ಕ್ರಮವಲ್ಲ. ಬದಲಾಗಿ ಭಾರತದ ಸಾರ್ವಭೌಮತ್ವ, ಅಸ್ಮಿತೆ, ನಾಗರಿಕರ ಕಡೆಗೆ ಸರ್ಕಾರದ ಜವಾಬ್ದಾರಿ ಹಾಗೂ ಭಯೋತ್ಪಾದನೆಯ ವಿರುದ್ಧದ ನೀತಿಯ ಪರಿಣಾಮಕಾರಿ ಮತ್ತು ನಿರ್ಣಾಯಕ ಕ್ರಮವಾಗಿದೆ ಎಂದು ಹೇಳಿದರು. ಜಮ್ಮು-ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪ್ರಾರಂಭಿಸಲಾದ ಆಪರೇಷನ್ ಸಿಂದೂರ ದೇಶದ ಸಶಸ್ತ್ರಪಡೆಗಳು ನಡೆಸಿದ ಉತ್ತಮ ಸಂಘಟಿತ ದಾಳಿಯಾಗಿದ್ದು, ೯ ಭಯೋತ್ಪಾದಕ ಮೂಲಸೌಕರ್ಯಗಳನ್ನು ನಿಖರವಾಗಿ ನಾಶಪಡಿಸಲಾಯಿತು ಎಂದು ತಿಳಿಸಿದರು. ದಾಳಿಯಲ್ಲಿ ನೂರಕ್ಕೂ ಹೆಚ್ಚು ಭಯೋತ್ಪಾದಕರು, ಅವರ ತರಬೇತುದಾರರು ಮತ್ತು ಸಹಚರರು ಹತ್ಯೆಗೀಡಾದರು. ಈ ಪೈಕಿ ಹೆಚ್ಚಿನವರು ಜೈಶೆ ಮೊಹಮ್ಮದ್, ಲಷ್ಕರೆ ತೈಬಾ ಮತ್ತು ಹಿಜ್ಬುಲ್ ಮುಜಾಯಿದ್ದೀನ್ ನಂತಹ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿದ್ದರು ಎಂದು ಸಚಿವ ರಾಜನಾಥ್ ಸಿಂಗ್ ಮಾಹಿತಿ ನೀಡಿದರು. ಪಹಲ್ಗಾಮ್‌ನಲ್ಲಿ ಪಾಕ್ ಪ್ರಾಯೋಜಿತ ಭಯೋತ್ಪಾದಕ ದಾಳಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಮುಗ್ಧ ಕುಟುಂಬಗಳಿಗೆ ನ್ಯಾಯ ಒದಗಿಸಲು ಆಪರೇಷನ್ ಸಿಂದೂರ ಪ್ರಾರಂಭಿಸಲಾಗಿದೆ ಎಂದರು. ಭಾರತದ ವೈಮಾನಿಕ ರಕ್ಷಣಾ ವ್ಯವಸ್ಥೆ, ಡ್ರೋನ್ ವ್ಯವಸ್ಥೆ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳು ಪಾಕಿಸ್ತಾನದ ಎಲ್ಲಾ ದಾಳಿಗಳನ್ನು ಸಂಪೂರ್ಣವಾಗಿ ವಿಫಲಗೊಳಿಸಿವೆ. ಪಾಕಿಸ್ತಾನದ ದಾಳಿಯಿಂದ ಭಾರತದ ಯಾವುದೇ ಪ್ರಮುಖ ಆಸ್ತಿಗಳಿಗೆ ಹಾನಿಯಾಗಿಲ್ಲ ಎಂದು ಅವರು ತಿಳಿಸಿದರು. ಭಾರತೀಯ ವಾಯುಪಡೆಯ ದಾಳಿಗಳು, ಭೂಸೇನೆಯ ಬಲವಾದ ಪ್ರತೀಕಾರ ಮತ್ತು ಭಾರತೀಯ ನೌಕಾಪಡೆಯ ದಾಳಿಯ ಭಯವು ಪಾಕಿಸ್ತಾನವನ್ನು ಶರಣಾಗುವಂತೆ ಮಾಡಿತು. ಭಯೋತ್ಪಾದನೆ ಮತ್ತು ಮಾತುಕತೆಗಳು ಒಟ್ಟಿಗೆ ಹೋಗಲು ಸಾಧ್ಯವಿಲ್ಲ ಎಂಬ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸರ್ಕಾರದ ನಿಲುವು ಸ್ಪಷ್ಟವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

**<><*<><>*><>**

’ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್’ ಯೋಜನೆಯಡಿ ದೇಶಾದ್ಯಂತ ಸುಮಾರು ೧೧ ಕೋಟಿ ಮಕ್ಕಳಿಗೆ ಕೇಂದ್ರ ಸರ್ಕಾರ ಬಿಸಿ ಮತ್ತು ಪೌಷ್ಠಿಕ ಆಹಾರ ನೀಡುತ್ತಿದೆ ಎಂದು ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಈ ಯೋಜನೆಯು ಕೇಂದ್ರ ಪ್ರಾಯೋಜಿತ ಯೋಜನೆಗಳಲ್ಲಿ ಒಂದಾಗಿದೆ. ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಒಂದರಿಂದ ಎಂಟನೇ ತರಗತಿಗಳಲ್ಲಿ ಓದುತ್ತಿರುವ ಎಲ್ಲಾ ಶಾಲಾ ಮಕ್ಕಳಿಗೆ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಹಭಾಗಿತ್ವದಲ್ಲಿ ಈ ಯೋಜನೆ ಜಾರಿಗೆ ತರಲಾಗಿದೆ ಎಂದು ವಿವರಿಸಿದರು. ಈ ಯೋಜನೆಯು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ೧೦ ಲಕ್ಷ ೩೫ ಸಾವಿರಕ್ಕೂ ಹೆಚ್ಚು ಶಾಲೆಗಳ ಸುಮಾರು ೧೧ ಕೋಟಿ ಮಕ್ಕಳನ್ನು ಒಳಗೊಳ್ಳುತ್ತದೆ ಎಂದರು. ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು, ಆಹಾರ ಧಾನ್ಯಗಳ ವೆಚ್ಚ, ಸಾರಿಗೆ ವೆಚ್ಚ, ನಿರ್ವಾಹಣಾ ಮೇಲ್ವಿಚಾರಣೆ ಮತ್ತು ವಿಕಾಸದ ವೆಚ್ಚಕ್ಕೆ ಶೇಕಡ ನೂರರಷ್ಟು ನೆರವನ್ನು ಒದಗಿಸುತ್ತದೆ. ೨೦೨೪-೨೫ರ ಅವಧಿಯಲ್ಲಿ ಕೇಂದ್ರ ಸರ್ಕಾರವು, ಭಾರತೀಯ ಆಹಾರ ನಿಗಮದ ಮೂಲಕ ಸುಮಾರು ೯ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ೨೬ ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಆಹಾರ ಧಾನ್ಯಗಳನ್ನು ಪೂರೈಸಿದೆ ಎಂದು ಸಚಿವ ಜಯಂತ್ ಚೌಧರಿ ತಿಳಿಸಿದರು.

**<><*<><>*><>**

ಕಳೆದ ಐದು ವರ್ಷಗಳಲ್ಲಿ ವಿವಿಧ ರಾಜ್ಯಗಳಲ್ಲಿ ಸಂಭವಿಸಿದ ರೈಲು ಅಪಘಾತಗಳಲ್ಲಿ ಒಟ್ಟು ೮೧ ಆನೆಗಳು ಸಾವನ್ನಪ್ಪಿವೆ ಎಂದು ಕೇಂದ್ರ ಪರಿಸರ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು, ರೈಲ್ವೆ ಸಚಿವಾಲಯದ ಸಹಯೋಗದೊಂದಿಗೆ ರೈಲ್ವೆ ಹಳಿಗಳಲ್ಲಿ ಆನೆಗಳ ಸಾವು ತಡೆಗಟ್ಟಲು ಅಂತರ್ ಸಚಿವಾಲಯ ಸಭೆಗಳು ಸೇರಿದಂತೆ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷದ ಗದ್ದಲದ ಹಿನ್ನೆಲೆಯಲ್ಲಿ ರಾಜ್ಯಸಭೆಯ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ಇದಕ್ಕೂ ಮುನ್ನ ದಿನದಲ್ಲಿ ಎರಡನೇ ಬಾರಿ ಮುಂದೂಡಿಕೆ ನಂತರ ಮಧ್ಯಾಹ್ನ ೨ ಗಂಟೆಗೆ ಸದನ ಸೇರಿದಾಗ, ಸಭಾಧ್ಯಕ್ಷ ಭುವನೇಶ್ವರ್ ಕಲಿತಾ ಅವರು, ಸಮುದ್ರದ ಮೂಲಕ ಸರಕು ಸಾಗಣೆ ವಿಧೇಯಕ-೨೦೨೫ ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಂಡರು. ಆದರೆ, ಪ್ರತಿಪಕ್ಷಗಳು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದವು. ಗದ್ದಲದ ನಡುವೆ ಸಭಾಪತಿಗಳು ದಿನದ ಮಟ್ಟಿಗೆ ಕಲಾಪವನ್ನು ಮುಂದೂಡಿದರು.

**<><*<><>*><>**

ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ರ ಐದನೇ ವರ್ಷಿಕೋತ್ಸವದ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವಾಲಯವು ನಾಳೆ ನವದೆಹಲಿಯಲ್ಲಿ ಅಖಿಲ ಭಾರತ್ ಶಿಕ್ಷಣ ಸಂಗಮ್-೨೦೨೫ ಆಯೋಜಿಸಿದೆ. ಭಾರತವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲಾಗಿದೆ. ೨೦೪೭ರ ವೇಳೆಗೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವುದು ದೇಶಾದ್ಯಂತ ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ಅನುಷ್ಠಾನದ ಮೂಲಕ ಸಾಧ್ಯ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಪ್ರತಿಪಾದಿಸಿದ್ದಾರೆ.

**<><*<><>*><>**

ಆಪರೇಷನ್ ಮಹಾದೇವ ಅಡಿಯಲ್ಲಿ ಜಮ್ಮು-ಕಾಶ್ಮೀರದ ಶ್ರೀನಗರದ ಹರ್ವಾನ್‌ನ ಲಿಡ್ವಾಸ್ ಪ್ರದೇಶದಲ್ಲಿ ಇಂದು ನಡೆದ ಕಾರ್ಯಾಚರಣೆಯಲ್ಲಿ ಮೂವರು ಭಯೋತ್ಪಾದಕರನ್ನು ಹೊಡೆದುರುಳಿಸಲಾಗಿದೆ ಎಂದು ಭಾರತೀಯ ಸೇನೆ ತಿಳಿಸಿದೆ. ಈ ಪ್ರದೇಶದಲ್ಲಿ ಕಾರ್ಯಾಚರಣೆ ಮುಂದುವರೆದಿದ್ದು, ಉಳಿದ ಉಗ್ರರಿಗಾಗಿ ಶೋಧ ಕಾರ್ಯ ಪ್ರಗತಿಯಲ್ಲಿದೆ. ಮೃತ ಭಯೋತ್ಪಾದಕರ ಗುರುತು ಇನ್ನು ಖಚಿತವಾಗಿಲ್ಲ ಎಂದು ಕಾಶ್ಮೀರ ಐಜಿಪಿ ಮಾಹಿತಿ ನೀಡಿದ್ದಾರೆ.

<><*<><>*><>

ಕೇಂದ್ರ ಭೂ ವಿಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಅವರು ಇಂದು ಭೂ ವಿಜ್ಞಾನ ಸಚಿವಾಲಯದ ಅಡಿಯಲ್ಲಿ ವಿವಿಧ ಸಂಸ್ಥೆಗಳು ಅಭಿವೃದ್ಧಿಪಡಿಸಿದ ೧೪ ಪ್ರಮುಖ ಉತ್ಪನ್ನಗಳು ಮತ್ತು ಉಪಕ್ರಮಗಳಿಗೆ ಚಾಲನೆ ನೀಡಿದರು. ಇವುಗಳಲ್ಲಿ ಮಳೆ ಮೇಲ್ವಿಚಾರಣೆ ಮತ್ತು ಬೆಳೆ-ಹವಾಮಾನ ಕ್ಯಾಲೆಂಡರ್‌ಗಳು, ಸುಧಾರಿತ ಹವಾಮಾನ ಮುನ್ಸೂಚನೆ ವ್ಯವಸ್ಥೆಗಳು, ನವೀಕರಿಸಿದ ತರಂಗ ಅಟ್ಲಾಸ್‌ಗಳು ಮತ್ತು ಸಮುದ್ರತಳ ಚಾರ್ಟ್‌ಗಳು, ಗಾಳಿಯ ಗುಣಮಟ್ಟದ ಮುನ್ಸೂಚನೆ ವ್ಯವಸ್ಥೆಗಳು, ಸಮುದ್ರ ಜೀವವೈವಿಧ್ಯ ವರದಿಗಳು ಮತ್ತು ನಾಲ್ಕು ಭಾರತೀಯ ನಗರಗಳ ಭೂಕಂಪನ ಸೂಕ್ಷ್ಮ ವಲಯ ಅಧ್ಯಯನಗಳು ಸೇರಿವೆ.

<><*<><>*><>

೨೦೨೪-೨೫ನೇ ಹಣಕಾಸು ವರ್ಷದ ಮೂರನೇ ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಭಾರತ್ ಸಂಚಾರ್ ನಿಗಮ್ ಲಿಮಿಟೆಡ್-ಬಿಎಸ್‌ಎನ್‌ಎಲ್ ಕ್ರಮವಾಗಿ ೨೬೦ ಕೋಟಿ ರೂಪಾಯಿ ಮತ್ತು ೨೮೦ ಕೋಟಿ ರೂಪಾಯಿಗಳ ನಿವ್ವಳ ಲಾಭ ಗಳಿಸಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ನವದೆಹಲಿಯಲ್ಲಿಂದು ಮಾಹಿತಿ ನೀಡಿದ್ದಾರೆ.

<><*<><>*><>

ಜಾರ್ಜಿಯಾದ ಬಟುಮಿಯಲ್ಲಿಂದು ನಡೆದ ಫಿಡೆ ಮಹಿಳಾ ಚೆಸ್ ವಿಶ್ವಕಪ್-೨೦೨೫ರಲ್ಲಿ ದಿವ್ಯ ದೇಶ್‌ಮುಖ್ ಅವರು ಗ್ರ್ಯಾಂಡ್ ಮಾಸ್ಟರ್ ಪ್ರಶಸ್ತಿಯನ್ನು ಗೆದ್ದ ನಾಲ್ಕನೇ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಇಂದು ನಡೆದ ಫೈನಲ್ ಪಂದ್ಯದ ಟೈ-ಬ್ರೇಕರ್‌ನಲ್ಲಿ ಭಾರತದವರೇ ಆದ ಕೊನೆರು ಹಂಪಿ ಅವರನ್ನು ಪರಾಭವಗೊಳಿಸಿ, ದಿವ್ಯ ದೇಶ್‌ಮುಖ್ ಈ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ಪ್ರಶಸ್ತಿ ವಿಜೇತೆ ದಿವ್ಯಾ ದೇಶ್‌ಮುಖ್ ಹಾಗೂ ರನ್ನರ್ ಅಪ್ ಕೊನೆರೊ ಹಂಪಿ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೫೭೨ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೮೯೧ ಅಂಕಗಳು ದಾಖಲಾಗಿವೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ, ೧೫೬ ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೬೮೧ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೬ ರೂಪಾಯಿ ೬೬ ಪೈಸೆಯಷ್ಟಾಗಿದೆ.

<><*<><>*><>

ಭಾರತ-ಸಿಂಗಪುರ ನಡುವಿನ ೧೪ನೇ ಆವೃತ್ತಿಯ ಜಂಟಿ ಮಿಲಿಟರಿ ಸಮರಾಭ್ಯಾಸ ಜೋದ್ಪುರದಲ್ಲಿ ನಿನ್ನೆಯಿಂದ ಆರಂಭವಾಗಿದೆ. ದಿಟ್ಟ ಕುರುಕ್ಷೇತ್ರ - ೨೦೨೫ ಹೆಸರಿನಲ್ಲಿ ನಡೆಯುತ್ತಿರುವ ಈ ಸಮರಾಭ್ಯಾಸ ಆಗಸ್ಟ್ ೪ರವರೆಗೂ ಮುಂದುವರಿಯಲಿದೆ. ಸಮರ ಕಣದಲ್ಲಿ ಯಂತ್ರಗಳ ಬಳಕೆ, ಕಾರ್ಯಾಚಾರಣೆ ವಿಧಾನ ಮತ್ತಿತರ ಕುರಿತು ಉಭಯ ದೇಶಗಳು ಅಭ್ಯಾಸ ನಡೆಸುತ್ತಿವೆ. ಭಾರತೀಯ ಸೇನೆ ತನ್ನ ಸಮರ ಕಲೆಗಳನ್ನು ಪ್ರದರ್ಶಿಸಿತು. ದ್ವಿಪಕ್ಷೀಯ ರಕ್ಷಣಾ ಸಹಕಾರ ಸಂಬಂಧಗಳ ಬಲವರ್ಧನೆ ಜೊತೆಗೆ, ವಿಶ್ವಸಂಸ್ಥೆಯ ಅಣತಿಯಂತೆ ಇಂಟರ್ ಪೋರ್ಟಬಲಿಟಿ ಮತ್ತು ಜಂಟಿ ತರಬೇತಿ ಸಾಮರ್ಥ್ಯಗಳನ್ನು ವಿಸ್ತರಣೆ ಮಾಡುವುದು ಈ ಸಮರಾಭ್ಯಾಸದ ಉದ್ದೇಶವಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**